JANUARY 27,2025
ALL INDIA RADIO- DHARWAD
PRADESH SAMACHARA (KANNADA) 12PM

<><><>

ಆಕಾಶವಾಣಿ

ಪ್ರದೇಶ ಸಮಾಚಾರ

ಓದಿದವವರು: ವಿವೇಕಾದಿತ್ಯ ಕನಿಯಾಲ

<><><>

ಹುಬ್ಬಳ್ಳಿ ತಾಲೂಕಿನ ವರೂರು ನವಗ್ರಹ ತೀರ್ಥಕ್ಷೇತ್ರದಲ್ಲಿ 12 ದಿನಗಳಿಂದ ಜರುಗಿದ ತೀರ್ಥಂಕರ ಪಂಚಕಲ್ಯಾಣಕ ಮಹೋತ್ಸವ, ಮಹಾಮಸ್ತಕಾಭಿಷೇಕ, ಸುಮೇರು ಪರ್ವತ ಲೋಕಾರ್ಪಣೆ ಕಾರ್ಯಕ್ರಮ ನಿನ್ನೆ ಸಂಪನ್ನಗೊಂಡಿತು. ಕಾರ್ಯಕ್ರಮದ ಕೊನೆ ದಿನದಂದು ಕೇಸರಿ, ಬಿಳಿ ಹಾಗೂ ಹಸಿರು ಬಣ್ಣದ ಜಲದಿಂದ ತೀರ್ಥಂಕರರಿಗೆ ಮಹಾಮಸ್ತಕಾಭಿಷೇಕ ಜರುಗಿತು. ಸಮಾರೋಪ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿದ ಆಚಾರ್ಯ ಗುಣಧರ ನಂದಿ ಮಾಹಾರಾಜರು, ಮಹಾಮಸ್ತಕಾಭಿಷೇಕ ವೆಚ್ಚವನ್ನು ಪಾವತಿಸಿ, ಉಳಿಕೆ ದಾನದ ಮೊತ್ತವನ್ನು, ಧಾರವಾಡದ ಕನ್ನಡ ಪ್ರಾಥಮಿಕ ಶಾಲೆಗಳ ಅಭಿವೃದ್ಧಿಗೆ ನೀಡಲಾಗುವುದು ಎಂದರು.

<><><>

ರಾಜ್ಯದಲ್ಲಿ ಮೈಕ್ರೋ ಫೈನಾನ್ಸ್ ಸಂಸ್ಥೆಗಳಿಂದ ಸಾಲಗಾರರಿಗೆ ಆಗುತ್ತಿರುವ ಕಿರುಕುಳವನ್ನು ತಪ್ಪಿಸಿ, ಸಾರ್ವಜನಿಕ ಹಿತವನ್ನು ಕಾಪಾಡಲು ಸರ್ಕಾರ ಬದ್ಧವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿದರು. ಬೆಂಗಳೂರಿನಲ್ಲಿ ಜರುಗಿದ ಉನ್ನತ ಮಟ್ಟದ ಸಭೆಯ ಬಳಿಕ ಸುದ್ದಿಗೋಷ್ಠಿ ಉದ್ದೇಶಿಸಿ, ಮಾತನಾಡಿದ ಅವರು ಬಲವಂತದ ಸಾಲ ವಸೂಲಾತಿಯನ್ನು ತಡೆಯಲು ಹೊಸ ಕಾನೂನು ರೂಪಿಸಲಾಗುವುದು ಎಂದರು.

<><><>

ಬೈಟ್: ಮುಖ್ಯಮಂತ್ರಿ ಸಿದ್ದರಾಮಯ್ಯ 37 ಸೆಕೆಂದುಗಳು

<><><>

ಮೈಕ್ರೋ ಫೈನಾನ್ಸ್‌ಗಳ ಸಮಸ್ಯೆ, ಕೇವಲ ರಾಜ್ಯಕ್ಕ ್ಟೇ ಅಲ್ಲ; ಇಡೀ ದೇಶದೆಲ್ಲೆಡೆ ಸಮಸ್ಯೆ ಉಂಟು ಮಾಡಿವೆ. ಅವುಗಳ ಕಾನೂನು ಬಾಹಿರ ಕಾರ್ಯಾಚರಣೆ ಬಂದ್ ಆಗಬೇಕು ಎಂದು, ಕಾರ್ಮಿಕ ಖಾತೆ ಸಚಿವ ಸಂತೋ ್ ಲಾಡ್ ಅಭಿಪ್ರಾಯ ಪಟ್ಟಿದ್ದಾರೆ. ಹುಬ್ಬಳ್ಳಿಯಲ್ಲಿ ಈ ವಿಷಯ ತಿಳಿಸಿದ ಅವರು, ಮೈಕ್ರೋ ಫೈನಾನ್ಸ್ ಸಾಧಕ ಬಾಧಕಗಳ ಬಗ್ಗೆ, ಸರ್ಕಾರ ಗಂಭೀರ ಕ್ರಮ ಕೈಗೊಳ್ಳಲಿದೆ ಎಂದರು.

<><><>

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಇಂದು ಸಂಜೆ 4 ಗಂಟೆ 30 ನಿಮಿಷಕ್ಕೆ ಬೆಂಗಳೂರಿನ ವಿಧಾನಸೌಧದ, ಪಶ್ಚಿಮ ದಿಕ್ಕಿನಲ್ಲಿ ಸ್ಥಾಪಿಸಲಾದ ನಾಡದೇವಿ ಭುವನೇಶ್ವರಿ ಕಂಚಿನ ಪ್ರತಿಮೆ ಅನಾವರಣ ಕಾರ್ಯಕ್ರಮ ಜರುಗಲಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನಾಡದೇವಿ ಭುವನೇಶ್ವರಿ ಪ್ರತಿಮೆ ಅನಾವರಣ ಮಾಡಲಿದ್ದಾರೆ.

<><><>

ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ಬಾಗಲಕೋಟೆಯ ಗೋಂಧಳಿ ಕಲಾವಿದ ವೆಂಕಪ್ಪ ಅಂಬಾಜಿ ಸುಗತೇಕರ ಅವರನ್ನು ನವ ಹಾಗೂ ನವೀಕರಿಸಬಹುದಾದ ಇಂಧನ ಖಾತೆ ಸಚಿವ ಪ್ರಲ್ಹಾದ್ ಜೋಶಿ ಅವರು ನವದೆಹಲಿಯ ತಮ್ಮ ನಿವಾಸದಲ್ಲಿ ಸನ್ಮಾನಿಸಿ ಗೌರವಿಸಿದರು. ಈ ಬಗ್ಗೆ ತಮ್ಮ ಸಾಮಾಜಿಕ ಮಾಧ್ಯಮ, ಎಕ್ಸ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು ಕಳೆದ 71 ವರ್ಷಗಳಿಂದ ಗೋಂಧಳಿ ಪದಗಳನ್ನು ಹಾಡಿ, ಜನಪದ ಕಲಾಪ್ರಕಾರವನ್ನು ಬೆಳೆಸುತ್ತಿರುವ ಅವರ ಕಾರ್ಯ ಪ್ರಶಂಸನೀಯ ಎಂದಿದ್ದಾರೆ.

<><><>

ದೇಶದಲ್ಲಿ ಮೊದಲ ಬಾರಿಗೆ ಹೃದಯದ ಬೈಪಾಸ್ ಶಸ್ತ್ರ ಚಿಕಿತ್ಸೆ ನಡೆಸಿದ್ದ ವೈದ್ಯ, ಡಾಕ್ಟರ್ ಕೆ.ಎಂ ಚೆರಿಯನ್ ಅವರು ಬೆಂಗಳೂರಿನಲ್ಲಿ ನಿಧನರಾದರು, ಅವರಿಗೆ 82 ವರ್ಷ ವಯಸ್ಸಾಗಿತ್ತು. 1991 ರಲ್ಲಿ ಅವರಿಗೆ ಪದ್ಮಶ್ರೀ ಪ್ರಶಸ್ತಿ ಪ್ರದಾನಿಸಿ ಗೌರವಿಸಲಾಗಿತ್ತು. ಪ್ರಧಾನಮಂತ್ರಿ ನರೇಂದ್ರ ಮೋದಿ ಸೇರಿದಂತೆ ಗಣ್ಯರು ಚೆರಿಯನ್ ಅವರ ನಿಧನಕ್ಕೆ ಸಂತಾಪ ಸೂಚಿಸಿದ್ದಾರೆ.

<><><>

ಹಿರಿಯ ಪತ್ರಕರ್ತ, ವರದಿಗಾರ ಗುರುವಪ್ಪ ಎನ್.ಟಿ ಬಾಳೇಪುಣಿ ಅವರು ಅಲ್ಪಕಾಲದ ಅಸೌಖ್ಯದಿಂದ ಮಂಗಳೂರಿನಲ್ಲಿ ನಿಧನರಾದರು. ಅವರಿಗೆ 62 ವರ್ಷ ವಯಸ್ಸಾಗಿತ್ತು. ಕಳೆದ 39 ವರ್ಷಗಳ ಕಾಲ ಪತ್ರಿಕೋದ್ಯಮದಲ್ಲಿ ಸೇವೆ ಸಲ್ಲಿಸಿದ್ದರು, ಕನ್ನಡ ಪತ್ರಿಕೋದ್ಯಮದಲ್ಲಿ ಸರೋಜಿನಿ ನಾಯ್ಡು ಪ್ರಶಸ್ತಿಗೆ ಭಾಜನರಾಗಿದ್ದ ಏಕೈಕ ಪತ್ರಕರ್ತ ಎಂದೆನಿಸಿದ್ದ ಅವರು, ಅಕ್ಷರ ಸಂತ ಪದ್ಮಶ್ರೀ ಹರೇಕಳ ಹಾಜಬ್ಬರನ್ನು 2004ರಲ್ಲಿ ತಮ್ಮ ಬರವಣಿಗೆಯ ಮೂಲಕ ಜಗತ್ತಿಗೆ ಪರಿಚಯಿಸಿದ್ದರು.

<><><>

ಸ್ಥಳೀಯ ಕಲಾವಿದರಲ್ಲಿ ಅಡಗಿರುವ ಪ್ರತಿಭೆಯನ್ನು ಹೊರತರಲು ಸಾಂಸ್ಕೃತಿಕ ಕಾರ್ಯಕ್ರಮಗಳು ಸಹಕಾರಿಯಾಗಿವೆ ಎಂದು, ಕಲಬುರಗಿ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಹೇಳಿದರು. ನಗರದ ಶ್ರೀ ಶರಣಬಸವೇಶ್ವರ ಅಪ್ಪ ಕೆರೆ ನಿರ್ವಹಣಾ ಪ್ರಾಧಿಕಾರದಿಂದ, ಕಳೆದ ಮೂರು ದಿನಗಳ ಕಾಲ ಆಯೋಜಿಸಲಾದ ಶಿಶಿರೋತ್ಸವ ಸಂಭ್ರಮ–2025ರ ಸಮಾರೋಪ ಸಮಾರಂಭದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

<><><>

ಧಾರವಾಡದ ಕರ್ನಾಟಕ ಮಹಾವಿದ್ಯಾಲಯದಲ್ಲಿ, 1975 ನೇ ವರ್ಷದ ಸಂಖ್ಯಾಶಾಸ್ತ್ರ ಬಿಎಸ್ಸಿ ಪದವಿ ವಿದ್ಯಾರ್ಥಿಗಳು, ಪದವಿ ಸ್ವರ್ಣಮಹೋತ್ಸವ ಹಾಗೂ ಗುರುವಂದನಾ ಕಾರ್ಯಕ್ರಮ ಆಯೋಜಿಸಿದರು. ವಿಶ್ರಾಂತ ಪ್ರಾಧ್ಯಾಪಕರಾದ ಡಾಕ್ಟರ್ ಎಸ್.ಎಚ್ ಕುಂಚೂರ ದಂಪತಿಯನ್ನು ಸನ್ಮಾನಿಸಿ, ಗೌರವಿಸಿದರು.

<><><>

ವಿಜಯಪುರ ಜಿಲ್ಲೆ, ಬಬಲೇಶ್ವರ ಮತ ಕ್ಷೇತ್ರದ, ಬೋಳಚಿಕ್ಕಲಕಿ ಗ್ರಾಮದಲ್ಲಿ, ನೂತನ ಪ್ರೌಢ ಶಾಲೆ ಕಟ್ಟಡ, ಗ್ರಾಮ ಪಂಚಾಯ್ತಿ ಕಟ್ಟಡ ಮತ್ತು ಗೊದಾಮುಗಳನ್ನು, ಸಚಿವ ಎಂ.ಬಿ.ಪಾಟೀಲ ಉದ್ಘಾಟಿಸಿದರು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..

<><><>